ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 31/5/2020

# ಸ್ಪೀಕರ್ ವಿರುದ್ಧ ಹಕ್ಕುಚ್ಯುತಿ ಮಂಡನೆಗೆ ನಿರ್ಧಾರ

31/5/20

ಸಂ.ಕ. ಸಮಾಚಾರ ಬೆಂಗಳೂರು:
ಕೊರೊನಾ ನಿವಾರಣೆಗೆ ಸಂಬಂಧಿಸಿದಂತೆ ಸರ್ಕಾರ ಖರೀದಿ ಮಾಡಿರುವ ಪಿಪಿಇ ಕಿಟ್ ಖರೀದಿಯಲ್ಲಿ ಅವ್ಯವಹಾರವಾಗಿದ್ದು ಇದರ ಪರಿಶೀಲನೆಗೆ ಸ್ಪೀಕರ್ ಅವರು ಅವಕಾಶ ಮಾಡಿಕೊಡದೇ ಇರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿರುವ ಲೆಕ್ಕಪತ್ರ ಸ್ಥಾಯಿ ಸಮಿತಿ ಸ್ಪೀಕರ್ ವಿರುದ್ಧ ಹಕ್ಕುಚ್ಯುತಿ ಮಂಡನೆ ಮಾಡಲು ತೀರ್ಮಾನಿಸಿದೆ.

ಈ ಕುರಿತು ಸಮಿತಿ ಅಧ್ಯಕ್ಷರೂ ಆಗಿರುವ ಎಚ್.ಕೆ. ಪಾಟೀಲ್ ಅವರು ಸ್ಪೀಕರ್ ಅವರ ಕ್ರಮದ ಕುರಿತು ಪತ್ರಿಕಾಗೋಷ್ಠಿಯಲ್ಲಿ ವಿವರಿಸಿ, ಪಿಪಿಇ ಕಿಟ್ ಖರೀದಿಯಲ್ಲಿ ಅವ್ಯವಹಾರ ನಡೆದಿಲ್ಲ ಎಂದು ಸಚಿವರು ತಿಳಿಸಿದ್ದಾರೆ. ಆದರೆ, ಖರೀದಿಯಲ್ಲಿ ಅವ್ಯವಹಾರ ನಡೆದಿದೆ ಎಂಬ ದೂರು ಬಂದ ಹಿನ್ನೆಲೆಯಲ್ಲಿ ಅದನ್ನು ಪರಿಶೀಲನೆ ಮಾಡಲು ನಿರ್ಧರಿಸಲಾಗಿತ್ತು. ಇದನ್ನು ಕಾಂಗ್ರೆಸ್ ವತಿಯಿಂದ ಮಾಡಲು ಹೋಗಿಲ್ಲ. ಲೆಕ್ಕಪತ್ರ ಸಮಿತಿ ಅದನ್ನು ಪರಿಶೀಲನೆ ಮಾಡಲು ಹೊರಟಿರುವುದು. ಆದರೆ, ಕೊರೊನಾ ಸಂದರ್ಭದಲ್ಲಿ ಕರ್ನಾಟಕ ವಿಧಾನಮಂಡಲ ಅಥವಾ ವಿಧಾನಸಭೆಯ ಸಮಿತಿಗಳು ಅಧ್ಯಯನ ಪ್ರವಾಸ ಕೈಗೊಂಡಲ್ಲಿ ಸಾರ್ವಜನಿಕರು ಸಮಿತಿ ಸದಸ್ಯರನ್ನು ಭೇಟಿ ಮಾಡುವ ಸಾಧ್ಯತೆಗಳಿರುತ್ತವೆ. ಇಂತಹ ಸಂದರ್ಭದಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳಬೇಕಾಗುತ್ತದೆ. ಇದು ಕಷ್ಟಕರವಾಗಿರುವುದರಿಂದ ಮುಂದಿನ ಆದೇಶದವರೆಗೆ ಯಾವುದೇ ಅಧ್ಯಯನ ಅಥವಾ ಪ್ರವಾಸ ಕೈಗೊಳ್ಳಬಾರದು ಎಂದು ವಿಧಾನಸಭಾಧ್ಯಕ್ಷರು ತಿಳಿಸಿದ್ದಾರೆ. ಇದು ಶಾಸನಸಭೆಯ ಕರ್ತವ್ಯಗಳಿಗೆ ಅಡ್ಡಿಯಾಗಿರುವುದರಿಂದ ಸ್ಪೀಕರ್ ವಿರುದ್ಧ ಹಕ್ಕುಚ್ಯುತಿ ಮಂಡನೆ ಮಾಡಲು ತೀರ್ಮಾನಿಸಲಾಗಿದೆ ಎಂದರು.

ರಾಜ್ಯದಲ್ಲಿ ಮದ್ಯದಂಗಡಿಗಳು ತೆರೆದಿವೆ. ಬಸ್‌ಗಳು ಸಂಚಾರ ಮಾಡುತ್ತಿವೆ. ನಾವು ಅಧ್ಯಯನಕ್ಕೆ ಹೋದರೆ ಮಾತ್ರ ಅನಾರೋಗ್ಯವಾಗುತ್ತದೆಯೇನು. ಸ್ಪೀಕರ್ ನಡೆ ಅಸಂವಿಧಾನಾತ್ಮಕವಾಗಿದೆ. ಈ ಹಿನ್ನೆಲೆಯಲ್ಲಿಯೇ ಸ್ಪೀಕರ್



ಅವರ ಆದೇಶದ ಕುರಿತು ಜೂನ್ 2ರಂದು ಸಮಿತಿ ಸಭೆ ಸೇರಿ ಸ್ಪೀಕರ್ ವಿರುದ್ಧ ಹಕ್ಕುಚ್ಯುತಿ ಮಂಡನೆ ಮಾಡಬೇಕೆ ಅಥವಾ ಬೇಡವೇ ಎಂಬ ಬಗ್ಗೆ ಸಮಿತಿ ತನ್ನ ನಿರ್ಣಯಗಳನ್ನು ತೆಗೆದುಕೊಳ್ಳಲಿದೆ ಎಂದು ವಿವರಿಸಿದರು.

ಪಿಪಿಇ ಕಿಟ್, ವೆಂಟಿಲೇಟರ್ ಖರೀದಿಯಲ್ಲಿ ಅವ್ಯವಹಾರವಾಗಿದೆಯೋ ಇಲ್ಲವೋ. ಈ ಬಗ್ಗೆ ಆರೋಗ್ಯ ಸಚಿವರು ಸಮಿತಿ ಮುಂದೆ ವರದಿಯನ್ನು ನೀಡಬೇಕಾಗಿತ್ತು. ಈ ಬಗ್ಗೆ ಸಮಿತಿ ಪರಾಮರ್ಶಿಸುತ್ತಿತ್ತು. ಆದರೆ, ಸಚಿವರು ಅದನ್ನು ಮಾಡಿಲ್ಲ. ವೆಂಟಿಲೇಟರ್ ಖರೀದಿಗೆ ಹಣ ನೀಡಿದ್ದಾರೋ ಇಲ್ಲವೋ ಗೊತ್ತಿಲ್ಲ. 500 ಎಂ.ಎಲ್. ಸ್ಯಾನಿಟೈಸರ್‌ಗೆ 90 ರೂ.ಗೆ ಟೆಂಡರ್ ಕರೆದು ನಂತರ ಅದನ್ನು ರದ್ದು ಮಾಡಿ ಅದೇ ಸ್ಯಾನಿಟೈಜರ್ ಅನ್ನು 250 ರೂ.ಗೆ ಖರೀದಿ ಮಾಡಲಾಗಿದೆ. ಇದು ಅವ್ಯವಹಾರವಲ್ಲದೆ ಮತ್ತೇನು. ಇದರ ಬಗ್ಗೆ ಸಮಿತಿ ಲೆಕ್ಕ ಕೇಳಬಾರದೇ. ಈ ಬಗ್ಗೆ ಸಾರ್ವಜನಿಕರಿಗ ಮಾಹಿತಿ ನೀಡಬೇಕು ಎಂದು ಎಚ್.ಕೆ. ಪಾಟೀಲ್ ಆಗ್ರಹಿಸಿದರು.

ಈ ಅವ್ಯವಹಾರದ ಕುರಿತಂತೆ ಮುಖ್ಯ ಕಾರ್ಯದರ್ಶಿ ಟಿ.ಎಂ ವಿಜಯಭಾಸ್ಕರ್ ಅವರಿಗೂ ಪತ್ರ ಬರೆದಿದ್ದು ಪಿಪಿಇ ಕಿಟ್, ವೆಂಟಿಲೇಟರ್, ಸ್ಯಾನಿಟೈಸರ್ ಸೇರಿದಂತೆ ಕೊರೊನಾ ನಿವಾರಣೆಗೆ ಸಂಬಂಧಿಸಿದಂತೆ ಖರೀದಿ ಮಾಡಲಾಗಿರುವ ವಸ್ತುಗಳ ಬಗೆಗಿನ ಕಡತವನ್ನು ಅಧಿಕಾರಿ ಮೂಲಕ ಲೆಕ್ಕಪತ್ರ ಸ್ಥಾಯಿ ಸಮಿತಿ ಮುಂದೆ ಇಡಬೇಕೆಂದು ಕೋರಿದ್ದೇನೆ ಎಂದರು.